<u>ದಿನಾಂಕ **17-07-2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>

ಈ ದಿನ ನಾನು ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ನ್ಯಾಯಲಯದಲ್ಲಿ ಹಾಜರಪಡಿಸಿದ್ದು, ಅದರಲ್ಲಿ ಬರೆದಿರುವ ಸಂಗತಿಗಳನ್ನು ನಾನೇ ಹೇಳಿ ಬರೆಯಿಸಿದ್ದು, ಅದು ನಿಜವಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

<u>ಮುಂದುವರೆದ ಮುಖ್ಯ ವಿಚಾರಣೆಃ- ಅರ್ಜಿದಾರರ ಪರ ಶ್ರೀ. ವಕೀಲರಿಂದಃ-</u>

(ಸಾಕ್ಷಿಯು ಗುರುತಿಸಿಕೊಳ್ಳಲು ಯಾವುದೇ ದಾಖಲೆಗಳು ಇರುವುದಿಲ್ಲ ಎಂದು ಹೇಳುತ್ತಾರೆ.)

<u>ಪಾಟೀ ಸವಾಲುಃ **2**ನೇ ಎದುರುದಾರರ ಪರ ಶ್ರೀ. ವಿ ವಿ ಟಿ ಪರವಾಗಿ ಶ್ರೀ. ಆರ್ ಜಿ ಟಿ ವಕೀಲರಿಂದಃ-</u>

1. ಅರ್ಜಿದಾರ ರಸ್ತೆ ಅಪಘಾತ ಹಿನ್ನಲೆಯಲ್ಲಿ ಅನುಭವಿಸಿದ ಗಾಯಗಳ ಚಿಕಿತ್ಸೆಗಾಗಿ ನಮ್ಮ ಆಸ್ಪತ್ರೆಗೆ ದಾಖಲಾಗಿದ್ದರು. ಅರ್ಜಿದಾರನಿಗೆ ನಾನೇ ಗಾಯದ ಪ್ರಮಾಣ ಪತ್ರ ನೀಡಿರುತ್ತೇನೆ ಎಂದರೆ ಸರಿ. ನಾನು ನೀಡಿರುವ ಗಾಯದ ಪ್ರಮಾಣ ಪತ್ರದಲ್ಲಿ ಅರ್ಜಿದಾರನ ವಯಸ್ಸು 70 ವರ್ಷ ಎಂದು ನಮೂದು ಮಾಡಿರುತ್ತೇನೆ. ಅರ್ಜಿದಾರರು ದಿನಾಂಕ 07-08-2022 ರಿಂದ 11-08-2022 ರವರೆಗೆ ನಮ್ಮ ಆಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆದಿರುತ್ತಾರೆ. ಅರ್ಜಿದಾರರು ನಮ್ಮ ಆಸ್ಪತ್ರೆಯಿಂದ ಡಿಸ್ಚಾರ್ಜ ಆದ ನಂತರವೂ ಸಹ ಮುಂದುವರೆದ ಚಿಕಿತ್ಸೆ ಪಡೆಯಲು ಬಂದು ಹೋಗಿ ಮಾಡಿರುತ್ತಾರೆ, ಬಂದು ಹೋದ ದಿನಗಳ ದಿನಾಂಕಗಳನ್ನು ದಾಖಲೆಗಳನ್ನು ಪರಿಶೀಲಿಸದೇ ನಿಖರವಾಗಿ ಹೇಳಲು ಸಾಧ್ಯವಿಲ್ಲ. ನನ್ನ ಸಾಕ್ಷ್ಯ ಪ್ರಮಾಣ ಪತ್ರದ 4ನೇ ಪ್ಯಾರಾದಲ್ಲಿ ಹೇಳಿರುವ ಕೆಲಸಗಳನ್ನು ಅರ್ಜಿದಾರನು ಮಾಡಲು ಅಸಮರ್ಥನಾಗಿರುತ್ತಾನೆ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರನಿಗೆ ಶಾಶ್ವತ ಅಂಗನ್ಯೂನ್ಯತೆ ಆಗುವಂತಹ ಯಾವುದೇ ಗಾಯಗಳು ಆಗಿಲ್ಲ ಎಂದರೆ ಸರಿಯಲ್ಲ. ಯಾವ ಆಧಾರದ ಮೇಲೆ ಅರ್ಜಿದಾರನ ಅಂಗನ್ಯೂನ್ಯತೆಯ ಪ್ರಮಾಣವನ್ನು ನಿರ್ಧಾರ ಮಾಡಿದ್ದೇನೆ ಎಂಬುದನ್ನು ಅಂಗನ್ಯೂನ್ಯತೆ ಪ್ರಮಾಣ ಪತ್ರದಲ್ಲಿ ನಮೂದಿಸಿಲ್ಲ ಎಂದರೆ ಸರಿಯಲ್ಲ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಸದರಿ ವಿಷಯ ಬರೆದಿರುವುದಿಲ್ಲ ಎಂದರೆ ಸರಿ. ಐ ಎಂ ಎ ನಿಯಮಗಳನ್ನು ಪಾಲಿಸದೇ ಹೆಚ್ಚಿನ ಅಂಗನ್ಯೂನ್ಯತೆ

ನಮೂದಿಸಿ ಅರ್ಜಿದಾರನಿಗೆ ನಾನು ಪ್ರಮಾಣ ಪತ್ರ ನೀಡಿರುತ್ತೇನೆ ಮತ್ತು ಅದಕ್ಕನುಸಾರವಾಗಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ: ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಅದೆ.

RAJASHEKHAR

Digitally signed by RAJASHEKHAR
Date: 2025.07.17 17:11:07 +0530

ಸದಸ್ಯರು ಮೋ.ವಾ.ಅ. ಮಂಡಳಿ-5,
ಜಮಖಂಡಿ.